# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿಬಿಎಂಪಿ/ಸಕಾಅ/ಕೊಉವಿ/ಪಿಆರ್/03/2022-23

ಸಹಾಯಕ ಅಭಿಯಂತರರ ಕಛೇರಿ
ಕೊಡಿಗೇಹಳ್ಳಿ ಉಪವಿಭಾಗ, ಯಲಹಂಕ ವಲಯ
9ನೇ ಅಡ್ಡರಸ್ತೆ, ಡಿ ಬ್ಲಾಕ್
ಸಹಕಾರನಗರ, ಬೆಂಗಳೂರು 560092
ದಿನಾಂಕ: 03.10.2022

**ದಿನಾಂಕ: 03.10.2022 ರಂದು ವಾರ್ಡ್ ಸಂಖ್ಯೆ 08 ರಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು:-**

**ಸಭೆಗೆ ಹಾಜರಿದ್ದವರು:**

- ಶ್ರೀ ಗುರು, ಕಾರ್ಯಪಾಲಕ ಅಭಿಯಂತರರು, ನೋಡೆಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ವಾರ್ಡ್ ಸಮಿತಿ.
- ಶ್ರೀ ಪ್ರವೀಣ್ಎ.ಆರ್., ಕಿರಿಯ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಕವಿತಾ, ಕಿರಿಯ ಆರೋಗ್ಯ ಪರಿವೀಕ್ಷಕರು, ಘನ ತ್ಯಾಜ್ಯ
- ಶ್ರೀ ವಿ. ಮಂಜುನಾಥ್,ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.
- ಶ್ರೀ ನವೀನ್ ಕುಮಾರ್, ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ ಬಿಬಿಎಂಪಿ
- ಶ್ರೀ ಜಿ. ವಿಶ್ವನಾಥ್, ಕಂದಾಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 08.

**ವಾರ್ಡ್ ಸಮಿತಿ ಸದಸ್ಯರು**

- ಶ್ರೀ ಭರತ್ರಾಜ್, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು
- ಶ್ರೀ ಮಹೇಶ್ ಎಂ.ಪಿ, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು
- ಶ್ರೀ ಭರತ್ರಾಜ್. ಪಿ, ಸಹಕಾರನಗರ ಸದಸ್ಯರು
- ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು
- ಶ್ರೀ ವೆಂಕಟಸ್ವಾಇ, ದೇವಿನಗರ ಸದಸ್ಯರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮಿತಿ ಕಾಯದರ್ಶಿಗಳಾದ ಶ್ರೀ.ಪ್ರವೀಣ್ಎ.ಆರ್.ರವರು ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್ ಸಮಿತಿಯ ಸದಸ್ಯರುಗಳು ಹಾಗೂ ಎಲ್ಲಾ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಸಭೆಯನ್ನು ಪ್ರಾರಂಭಿಸಲಾಯಿತು ಹಾಗೂ ಹೊಸದಾಗಿ ವಾರ್ಡ್ ವಿಂಗಡಣೆಯ ಬಗ್ಗೆ ಮಾತನಾಡಿ, ಈ ಹಿಂದಿನ ಸಭೆಯಲ್ಲಿ ಚರ್ಚಿಸಿದ ಸಮಸ್ಯೆಗಳನ್ನು ಪರಿಹರಿಸಲಾಗಿದೆ ಎಂದು ಸಭೆಗೆ ತಿಳಿಸಿದರು.

ನೋಡಲ್ ಅಧಿಕಾರಿರವರು ಮಾತನಾಡುತ್ತ ಹಿಂದಿನ ಸಭೆಯ ನಡುವಳಿಗಳ ಬಗ್ಗೆ ಓದಿ ಚರ್ಚಿಸಿ, ಸಮಸ್ಯೆಗಳನ್ನು ಬಗೆಹರಿಸಿರುವ ಕುರಿತು ಹಾಜರಿದ್ದ ಅಧಿಕಾರಿಗಳಿಗೆ ಮತ್ತು ವಸತಿ ಕ್ಷೇಮಾಭಿವೃದಿ ಸಂಘದ ಸದಸ್ಯರುಗಳ ಜೊತೆಗೆ ಚರ್ಚಿಸಿದರು. ನಂತರ ಹಾಜರಿದ್ದ ಅಧಿಕಾರಿಗಳು ಸಮಸ್ಯೆಗಳನ್ನು ಬಗೆಹರಿಸಿರುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಭರತ್‌ರಾಜ್, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು ರವರು ಮಾತನಾಡಿ ಸದರಿ ಬಡಾವಣೆಯಲ್ಲಿ ಬೀದಿ ದೀಪಗಳ ಸಮಸ್ಯ ಇದ್ದು, ಬಗೆಹರಿಸಲು ಸಭೆಯಲ್ಲಿ ಮನವಿ ಮಾಡಿಕೊಂಡರು. ಸದರಿ ಬಡಾವಣೆಯಲ್ಲಿ ಚರಂಡಿಯ ನೀರು ರಸ್ತೆಯ ಮೇಲೆ ಹರಿಯುತ್ತಿರುವುದು ಕಂಡುಬಂದಿದ್ದು, ಇದರಿಂದ ಸಾರ್ವಜನಿಕರಿಗೆ ರೋಗ ಹರಡಬಹುದಾಗಿರುತ್ತದೆ ಎಂದು ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಬೀದಿ ದೀಪಗಳನ್ನು ಸೇರಿಪಡಿಸಲು ತಿಳಿಸಿದರು. ಚರಂಡಿಯ ನೀರು ರಸ್ತೆಯ ಮೇಲೆ ಹರಿಯುತ್ತಿರುವುದನ್ನು ಬಿಡ್ಲ್ಯೂಎಸ್‌ಎಸ್‌ಬಿ ಇಂಜಿನಿಯರ್ ದೂರವಾಣಿ ಮುಖಾಂತರ ಸಮಸ್ಯೆಯನ್ನು ಬಗೆಹರಿಸಿಕೊಡಲು ಸೂಚಿಸಿದರು. ಈ ಕುರಿತು ಬಿಡ್ಲ್ಯೂಎಸ್‌ಎಸ್‌ಬಿ ಇಂಜಿನಿಯರ್ ರವರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಮಹೇಶ್ ಎಂ.ಪಿ, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು ಮಾತನಾಡಿ ಸದರಿ ಬಡಾವಣೆಯಲ್ಲಿ ಕಸವನ್ನು ಸಾರ್ವಜನಿಕರು ರಸ್ತೆಯಲ್ಲಿ ಹಾಕುತ್ತಿರುವುದು, ಇದರಿಂದ ಹೊಸದಾಗಿ ಬ್ಲಾಕ್‌ಸ್ಪಾಟ್‌ಗಳು ಕಂಡುಬಂದಿರುತ್ತದೆ. ಈ ರೀತಿ ಮಾಡುತ್ತಿರುವವರ ವಿರುದ್ಧ ಕ್ರಮ ಜರುಗಿಸುವಂತೆ ಹಾಗೂ ನಂ 303, 16ನೇ ಅಡ್ಡರಸ್ತೆಯಲ್ಲಿ ರಸ್ತೆಯ ಮೇಲೆ ಕಾಮಗಾರಿ ಸಾಮಗ್ರಿಗಳನ್ನು ಸುರಿದು ಕಾವೇರಿ ನೀರಿನ ಪೈಪ್‌ಗಳನ್ನು ಹಾನಿ ಮಾಡಿರುತ್ತಾರೆ. ಅವರಿಂದ ಸಾರ್ವಜನಿಕರಿಗೆ ಬಹಳ ತೊಂದರೆ ಉಂಟು ಮಾಡುತ್ತಿದೆ, ಇವರ ವಿರುದ್ಧ ಕ್ರಮ ಜರುಗಿಸುವಂತೆ ಸಭೆಗೆ ತಿಳಿಸಿದರು.

ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ಬಿಬಿಎಂಪಿ ಕಿರಿಯ ಅಭಿಯಂತರರಿಗೆ ಸಮಸ್ಯೆಯನ್ನು ಬಗೆಹರಿಸಿಕೊಡಲು ಸೂಚಿಸಿದರು. ಈ ಕುರಿತು ಕಿರಿಯ ಅಭಿಯಂತರರು ಮಾತನಾಡಿ ಸದರಿ ಕಟ್ಟಡಕ್ಕೆ ನೋಟಿಸ್ ನೀಡಿ ಸಮಸ್ಯೆಯನ್ನು ಬಗೆಹರಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

ಶ್ರೀಮತಿ. ಶಾಂತಕುಮಾರಿ, ಬಾಲಾಜಿ ಬಡಾವಣೆ, ಸದಸ್ಯರು ಮಾತನಾಡಿ, ಸದರಿ ಬಡಾವಣೆಯಲ್ಲಿರುವ ಬ್ಯಾಟರಿ ಅಂಗಡಿಯ ಮುಂದೆ ಪಾರ್ಕಿಂಗ್ ಸಮಸ್ಯೆ ಇದ್ದು, ಇದನ್ನು ಪರಿಹರಿಸಿ ಕೊಡಲು ಸಭೆಗೆ ಮನವಿ ಮಾಡಿಕೊಂಡರು ಹಾಗೂ ಸದರಿ ಬಡಾವಣೆಯಲ್ಲಿ ಚರಂಡಿಯಲ್ಲಿ ಸಿಲ್ಟ್ ತುಂಬಿರುವುದರಿಂದ ನೀರಿನ ಹರಿವು ಸಾರಾಗವಾಗಿ ಹರಿಯದೆ ಸ್ಥಗಿತವಾಗಿರುತ್ತದೆ. ಸದರಿ ಬಡಾವಣೆಯಲ್ಲಿ ಬೀದಿ ದೀಪಗಳ ಸಮಸ್ಯ ಇದ್ದು, ಇದರಿಂದ ಸಾರ್ವಜನಿಕರಿಗೆ ಬಹಳ ತೊಂದರೆಯನ್ನುಂಟು ಮಾಡುತ್ತಿದೆ ಎಂದು ಸಭೆಯಲ್ಲಿ ಮನವಿ ಮಾಡಿದರು.

ಈ ಕುರಿತು ನೋಡಲ್ ಅಧಿಕಾರಿಗಳು ಮಾತನಾಡಿ ಸಿಲ್ಟ್ ಮತ್ತು ಟ್ರಾಕ್ಟರ್ ಬಿಟ್ಟು ಸಮಸ್ಯೆಯನ್ನು ಬಗೆಹರಿಸಲು ಶ್ರೀ ಪ್ರವೀಣ್ ರವರಿಗೆ ಸೂಚಿಸಿದರು ಹಾಗೂ ಸದರಿ ಬ್ಯಾಟರಿ ಅಂಗಡಿಗೆ ರಸ್ತೆಯಲ್ಲಿ ವಾಹನಗಳನ್ನು ನಿಲ್ಲಿಸದಂತೆ ನೋಟಿಸ್ ಜಾರಿ ಮಾಡುವಂತೆ ಹಿರಿಯ ಆರೋಗ್ಯ ಪರಿವಿಕ್ಷಕರಿಗೆ ತಿಳಿಸಿದರು. ಬೀದಿ ದೀಪಗಳ ಸಮಸ್ಯೆಯನ್ನು ಪರಿಹರಿಸಿಕೊಡಲು ಕಿರಿಯ ಅಭಿಯಂತರರು, ವಿದ್ಯುತ್ ವಿಭಾಗದವರಿಗೆ ಸೂಚಿಸಿದರು. ಈ ಕುರಿತು ವಿದ್ಯುತ್ ವಿಭಾಗದವರು ಸಮಸ್ಯೆಯನ್ನು ಪರಿಹರಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

ಶ್ರೀ ಮಹೇಶ್ ಎಂ.ಪಿ, ಸಿ.ಕ್ಯೂ.ಎ.ಎಲ್ ಬಡಾವಣೆ ಸದಸ್ಯರು ಮಾತನಾಡಿ ಸದರಿ ಬಡಾವಣೆಯ 2ನೇ ಮತ್ತು 3ನೇ ಮುಖ್ಯರಸ್ತೆಯಲ್ಲಿ ಕಾವೇರಿ ನೀರಿನ ಪೈಪ್‌ಗಳಿಂದ ನೀರು ಸೋರಿಕೆಯಾಗುತ್ತಿರುವುದು ಕಂಡುಬಂದಿರುತ್ತದೆ, ಸದರಿ ಸಮಸ್ಯೆಯನ್ನು ಬಗೆಹರಿಸಿಕೊಡಲು ಸಭೆಯಲ್ಲಿ ಮನವಿ ಮಾಡಿಕೊಂಡರು.

ಈ ಕುರಿತು ನೋಡಲ್ ಅಧಿಕಾರಿಯವರು ಮಾತನಾಡಿ ಬಿಡ್ಲ್ಯೂಎಸ್‌ಎಸ್‌ಬಿ ಇಂಜಿನಿಯರ್ ದೂರವಾಣಿ ಮುಖಾಂತರ ಸಮಸ್ಯೆಯನ್ನು ಬಗೆಹರಿಸಿಕೊಡಲು ಸೂಚಿಸಿದರು. ಈ ಕುರಿತು ಬಿಡ್ಲ್ಯೂಎಸ್‌ಎಸ್‌ಬಿ ಇಂಜಿನಿಯರ್ ರವರು ಮಾತನಾಡಿ ಸಮಸ್ಯೆಯನ್ನು ಬಗೆಹರಿಸಿಕೊಡುವುದಾಗಿ ಸಭೆಗೆ ತಿಳಿಸಿದರು.

ಅಂತಿಮವಾಗಿ ಶ್ರೀ ಗುರು, ನೋಡಲ್ ಅಧಿಕಾರಿಯವರು ಮಾತನಾಡಿ ಬಿಬಿಎಂಪಿಯ ಮೇಲ್ಕಂಡ ಅಂಶಗಳ ಬಗ್ಗೆ ವಿವರವಾಗಿ ಅಧಿಕಾರಿಗಳಿಗೆ ನಿರ್ದೇಶನ ನೀಡಿ, ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸೂಚಿಸಿದರು ನಂತರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಮತ್ತು
ಕಿರಿಯ ಅಭಿಯಂತರರು
ವಾರ್ಡ್ 8, ಕೊಡಿಗೇಹಳ್ಳಿ ಉಪ ವಿಭಾಗ

ಪ್ರತಿಯನ್ನು:-

1. ಮಾನ್ಯ ಆಡಳಿತ ಅಧಿಕಾರಿಗಳು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಮುಖ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
3. ಮಾನ್ಯ ಅಪರ ಆಯುಕ್ತರು, ಯಲಹಂಕ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
4. ಆರೋಗ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿಸಲ್ಲಿಸಿದೆ.
5. ವಲಯ ಅರಣ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಸಭೆಗೆ ಹಾಜರಾಗಲು ತಿಳಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ರವರ ಮಾಹಿತಿಗಾಗಿ ಕಳುಹಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೊಡಿಗೇಹಳ್ಳಿ ಉಪವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿಭಾಗ, ಬಿಬಿಎಂಪಿ ರವರ ಮಾಹಿತಿಗಾಗಿ ಕಳುಹಿಸಿದೆ.
10. ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿರವರ ಮಾಹಿತಿಗಾಗಿ ಕಳುಹಿಸಿದೆ.
11. ಕಛೇರಿ ಕಡತಕ್ಕೆ.